# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2018-19ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ **ಕ್ರೈಸ್ತರ ಅಭಿವೃದ್ಧಿ ಯೋಜನೆಯಡಿ "ಬಿದಾಯಿ"** ಕಾರ್ಯಕ್ರಮಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 257 ಎಂಡಿಎಸ್ 2018, ಬೆಂಗಳೂರು ದಿ: 06.04.2018.

2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018 ಬೆಂಗಳೂರು ದಿ: 11.04.2018.

>>><<<

**ಪ್ರಸ್ತಾವನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2018-19ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಿ ಉಲ್ಲೇಖ (1)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ **ಕ್ರೈಸ್ತರ ಅಭಿವೃದ್ಧಿ ಯೋಜನೆ**ಯನ್ನು ಸಹ ಮುಂದುವರೆಸಲಾಗಿದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳಿಗೆ 2018-19ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತನ್ನು ಉಲ್ಲೇಖ (2)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ದಿ:31-03-2018 ಕ್ಕೆ ಬಾಕಿ ಉಳಿದಿರುವ ಹಾಗೂ 2018-19 ನೇ ಸಾಲಿನಲ್ಲಿ ಬಿದಾಯಿ ಕಾರ್ಯಕ್ರಮದಡಿ ಸ್ವೀಕೃತವಾಗಿರುವ ಅರ್ಹ ಕ್ರೈಸ್ತರ ಫಲಾನುಭವಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ.

ಕ್ರೈಸ್ತರ ಅಭಿವೃದ್ಧಿ ಯೋಜನೆಯಡಿ ಮೊದಲನೇ ಕಂತಿನ ಅನುದಾನ ರೂ. 5832.75 ಲಕ್ಷಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದ ಪೈಕಿ **ಕ್ರೈಸ್ತರ** ಫಲಾನುಭವಿಗಳಿಗೆ ಬಿದಾಯಿ ಯೋಜನೆಯಡಿ ಜಿಲ್ಲಾವಾರು ಸ್ವೀಕೃತವಾಗಿರುವ ಅರ್ಜಿಗಳಿಗೆ ನಿಯಮಾನುಸಾರ ಅನುದಾನ ಮಂಜೂರುಮಾಡಲು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ ಮೊದಲನೇ ಕಂತಿನ ಅನುದಾನ ಒಟ್ಟು ರೂ252.00 ಲಕ್ಷ (ರೂ. ಎರಡು ಕೋಟಿ ಐವತ್ತೆರಡು ಲಕ್ಷ ರೂ ಮಾತ್ರ) ಗಳನ್ನು ಸಂಬಂಧಪಟ್ಟ ಆಯಾ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,** ರವರಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

## ಆ ದೇ ಶ

**ಸಂಖ್ಯೆ: ಅಸಂನಿ/ಆ/ಬಿದಾಯಿ/ಸಿಆರ್-102/2018-19** **ದಿನಾಂಕ: 02.05.2018**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ **ಕ್ರೈಸ್ತ** ಫಲಾನುಭವಿಗಳಿಗೆ ಬಿದಾಯಿ ಯೋಜನೆಯಡಿ ಜಿಲ್ಲಾವಾರು ಸ್ವೀಕೃತವಾಗಿರುವ ಅರ್ಜಿಗಳಿಗೆ ನಿಯಮಾನುಸಾರ ಅನುದಾನ ಮಂಜೂರುಮಾಡಲು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ ಮೊದಲನೇ ಕಂತಿನ ಅನುದಾನ ಒಟ್ಟು ರೂ252.00 ಲಕ್ಷ (ರೂ. ಎರಡು ಕೋಟಿ ಐವತ್ತೆರಡು ಲಕ್ಷ ರೂ ಮಾತ್ರ) ಗಳನ್ನು ಆಯಾ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರವರಿಗೆ** ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.